financial position of the State.

ನೂತನ ಗ್ರಾಮ ಪಂಚಾಯತ್ ವ್ಯವಸ್ಥೆ

1032 (1522)

ಶ್ರೀ ಡಿ.ಎ. ಸದಾನಂದಗೌಡ (ಪುತ್ತೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

೧. ಗ್ರಾಮ ಪಂಚಾಯತ್‌ನಿಂದ ಬದಲಾಗುತ್ತಿರುವ ಪಂಚಾಯತ್ ವ್ಯವಸ್ಥೆಯಲ್ಲಿ ನೂತನ ಪಂಚಾಯತ್ ನಿರ್ಮಾಣದಲ್ಲಿ ಕೇಂದ್ರ ಸ್ಥಾನಗಳನ್ನು ನಿಗಧಿಪಡಿಸುವ ಸಂದರ್ಭದಲ್ಲಿ ಸರ್ಕಾರ ಹಾಕಿಕೊಂಡಿರುವ ರೂಪು ರೇಷೆಗಳೇನು ?

೨. ಹೊಸ ಪಂಚಾಯತ್ ವ್ಯವಸ್ಥೆಯಲ್ಲಿ ತಾಲೂಕ್ ಪಂಚಾಯತ್ ವ್ಯವಸ್ಥೆಗೆ ಹೆಚ್ಚಿನ ಮಹತ್ವವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ತಾಲ್ಲೂಕು ಪಂಚಾಯತ್ ಸಮಿತಿಯನ್ನು ರದ್ದುಪಡಿಸುವ ಉದ್ದೇಶ ಸರ್ಕಾರಕ್ಕಿದೆಯೇ

೩. ಗ್ರಾಮ ಪಂಚಾಯತ್ ಅಧ್ಯಕ್ಷ ಮತ್ತು ತಾಲೂಕ್ ಪಂಚಾಯತ್‌ಸದಸ್ಯರುಗಳ ಕಾರ್ಯವ್ಯಾಪ್ತಿಯ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾ.ಅ.ಪಂ.ರಾಜ್ ಸಚಿವರು.)

೧. ನೂತನ ಗ್ರಾಮಪಂಚಾಯತ್ ವ್ಯವಸ್ಥೆಯಲ್ಲಿ ಪುನರ್‌ವಿಂಗಡಣೆ ಮಾಡುವಾಗ ಜಿಲ್ಲಾಧಿಕಾರಿಯು ಗ್ರಾಮಪಂಚಾಯತಿಯ ಕೇಂದ್ರಸ್ಥಾನವನ್ನು ನಿಗಧಿಪಡಿಸಬೇಕಾಗಿರುತ್ತದೆ. ಈ ರೀತಿ ಮಾಡುವಾಗ ಆ ಹಳ್ಳಿಯು ಶಾಲೆ, ಆರೋಗ್ಯ ಕೇಂದ್ರ ಇತ್ಯಾದಿ ಸೌಕರ್ಯಗಳನ್ನು ಹೊಂದಿರಬೇಕು ಹಾಗೂ ಈ ಪಂಚಾಯತಿಗೆ ಒಳಪಡುವ ಗ್ರಾಮಗಳಿಗೆ ಸರಿಯಾಗಿ ಸಂಪರ್ಕಿಸುವಂತಿರಬೇಕು.

ಹಾಗೂ ಹಿಂದಿನ ಗ್ರಾಮ ಪಂಚಾಯತಿ ಅಥವಾ ಮಂಡಲ ಪಂಚಾಯತಿಗಳು ಮೂಲಭೂತ ಸೌಕರ್ಯಗಳನ್ನು ಹೊಂದಿರಬಹುದಾದ್ದರಿಂದ ಸಾಧ್ಯವಾದಷ್ಟು ಮಟ್ಟಿಗೆ ಅಂತಹ ಗ್ರಾಮಗಳನ್ನು ಹೊಸದಾಗಿ ರಚಿಸಲಾಗಿರುವ ಗ್ರಾಮ ಪಂಚಾಯತಿಗಳ ಕೇಂದ್ರ ಸ್ಥಾನವನ್ನಾಗಿ ಅಧಿಸೂಚಿಸ ಬೇಕಾಗಿರುತ್ತದೆ. ಮತ್ತು ಮುಖ್ಯವಾಗಿ ಪಂಚಾಯತಿ ಪ್ರದೇಶದ ಸಾರ್ವಜನಿಕರ ಅನುಕೂಲತೆಯನ್ನು ಪರಿಗಣಿಸಿ ಕೇಂದ್ರಸ್ಥಾನವನ್ನು ನಿರ್ಧರಿಸಬೇಕಾಗುತ್ತದೆ.

೨. ಇಲ್ಲ . ತಾಲ್ಲೂಕು ಪಂಚಾಯತಿಗಳನ್ನು ರದ್ದು ಪಡಿಸುವ ಉದ್ದೇಶ ಸರ್ಕಾರಕ್ಕಿರುವುದಿಲ್ಲ.

೩. ಗ್ರಾಮಪಂಚಾಯತಿ ಅಧ್ಯಕ್ಷ ಮತ್ತು ತಾಲ್ಲೂಕು ಪಂಚಾಯತಿ ಸದಸ್ಯರ ಕಾರ್ಯವ್ಯಾಪಿಗೆ ಕ್ರಮವಾಗಿ ಕರ್ನಾಟಕ ಪಂ.ರಾಜ್ ಅಧಿನಿಯಮ ಪ್ರಕರಣ 62ಮತ್ತು 147ರಲ್ಲಿ ಉಪಬಂಧ ಮಾಡಿರುವಂತೆ ಇರುತ್ತದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮಹಿಳಾ ವೈದ್ಯರುಗಳ ನೇಮಕಾತಿ.

1073(1523)

ಶ್ರೀ ಡಿ.ಎ. ಸದಾನಂದಗೌಡ (ಪುತ್ತೂರು)

ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಖಾಲಿ ಇರುವ ವೈದ್ಯರ ಒಟ್ಟು ಸಂಖ್ಯೆ ಎಷ್ಟು ? ಈ ಹುದ್ದೆಗಳನ್ನು ಎಂದಿನಿಂದ ಭರ್ತಿ ಮಾಡಲಾಗುವುದು ?